# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 625(642)

**ಸದಸ್ಯರ ಹೆಸರು** : ಶ್ರೀ ಕೆ.ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)

**ಉತ್ತರಿಸುವ ದಿನಾಂಕ** : 19.09.2022

**ಉತ್ತರಿಸುವ ಸಚಿವರು** : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಳ್ತಂಗಡಿ ತಾಲ್ಲೂಕು ಶಿಕ್ಷಣ ಇಲಾಖೆಯು ಗುರಿ ಸಾಧನೆಗಾಗಿ ಮತ್ತು ಮಕ್ಕಳ ಕಲಿಕಾ ಹಿತದೃಷ್ಟಿಯಿಂದ ಅತಿಥಿ ಶಿಕ್ಷಕರನ್ನು ನೇಮಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ ಈ ಅತಿಥಿ ಶಿಕ್ಷಕರಿಗೆ ನೀಡಲಾಗುತ್ತಿರುವ ಗೌರವಧನ ಮೊತ್ತವು ಅವರ ಜೀವನ ನಿರ್ವಹಣೆಗೆ ಕಷ್ಟವಾಗಿರುವುದನ್ನು ಸರ್ಕಾರ ಮನಗಂಡಿದೆಯೇ; | ಸರ್ಕಾರದ ಆದೇಶ ಸಂಖ್ಯೆ:ಇಪಿ 14 ಎಸ್‌ಇಎಸ್ 2022 ದಿನಾಂಕ:18.06.2022ರಂದು ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿನ ಅತಿಥಿ ಶಿಕ್ಷಕರ ಗೌರವ ಸಂಭಾವನೆಯನ್ನು ರೂ.7500/ ರಿಂದ ರೂ.10,000/-ಹಾಗೂ ಪ್ರೌಢಶಾಲೆಗಳಲ್ಲಿನ ಅತಿಥಿ ಶಿಕ್ಷಕರ ಗೌರವ ಸಂಭಾವನೆಯನ್ನು ರೂ.8000/- ರಿಂದ ರೂ.10,500/-ಗಳಿಗೆ ಪರಿಷ್ಕರಿಸಲಾಗಿದೆ. |
| ಇ) | ಮನಗಂಡಿದ್ದಲ್ಲಿ, ಈ ಗೌರವಧನವನ್ನು ಪ್ರತಿ ತಿಂಗಳೂ ಸೂಕ್ತ ಸಮಯದಲ್ಲಿ ನೀಡಲಾಗುವುದೇ? | 2022-23ನೇ ಶೈಕ್ಷಣಿಕ ಸಾಲಿನಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ತಾತ್ಕಾಲಿಕವಾಗಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ನೇಮಕ ಮಾಡಿಕೊಳ್ಳಲಾದ ಅತಿಥಿ ಶಿಕ್ಷಕರ ಗೌರವ ಸಂಭಾವನೆಯನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 689 ವೆಚ್ಚ-6/ 2022 ದಿನಾಂಕ:13.09.2022ರಂದು ಆರ್ಥಿಕ ಇಲಾಖೆಯಿಂದ ಸಂಬಂಧಪಟ್ಟ ತಾಲ್ಲೂಕು ಪಂಚಾಯ್ತಿಗಳಿಗೆ ನೇರವಾಗಿ ಅನುದಾನ ಬಿಡುಗಡೆ ಮಾಡಲಾಗಿದೆ |

ಇಪಿ 445 ಎಸ್‌ಇಎಸ್ 2022

(ಬಿ.ಸಿ.ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು